ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ________

ಪತ್ರಿಕೆಯ ಹೆಸರು : NAME OF THE NEWS PAPER: ________ ದಿನಾಂಕ : DATE : 5/2/2020

# ವಿವಿಧ ಯೋಜನೆಗೆ ಸಿಎಂ ಚಾಲನೆ

5/2/20

ಬೆಂಗಳೂರು: ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಜನಸ್ನೇಹಿ ಸಹಾಯ ವೇದಿಕೆ, ಕಾರ್ಮಿಕ ಇಲಾಖೆ ಆಶಾದೀಪ ಯೋಜನೆ, ಸಕಾಲ ಮಿಷನ್ ಭಾಗವಾದ ಜನ ಸೇವಕ ಯೋಜನೆ ಹಾಗೂ ಮಾಹಿತಿ ಹಕ್ಕಿನ ಆನ್‌ಲೈನ್ ಸೇವೆಗೆ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಮಂಗಳವಾರ ಚಾಲನೆ ನೀಡಿದರು.



ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ನಾಲ್ಕು ಕಾರ್ಯಕ್ರಮಕ್ಕೆ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಚಾಲನೆ ನೀಡಿ, ಹೊಸ ಸೇವೆಗಳನ್ನು ಜನ ಸಾಮಾನ್ಯರು ಸದುಪಯೋಗ ಮಾಡಿಕೊಳ್ಳಬೇಕಿದ್ದು ಸರ್ಕಾರಿ ಸೇವೆಗಳನ್ನು ಮನೆ ಮನೆಗೆ ತಲುಪಿಸುವ ಹೊಸ ಕಾರ್ಯಕ್ರಮ ಇದಾಗಿದೆ ಎಂದರು.

ಆರ್ಥಿಕ ಮತ್ತು ಸಾಂಖ್ಯಿಕ ನಿರ್ದೇಶನಾಲಯ ಸಿದ್ಧಪಡಿಸಿರುವ 'ಕರ್ನಾಟಕ ಅಂಕಿ ಅಂಶಗಳ ನೋಟ 2018-19 ಅನ್ನು ಸಿಎಂ ಇದೇ ವೇಳೆ ಲೋಕಾರ್ಪಣೆ ಮಾಡಿದರು. ಕಾರ್ಮಿಕ ಸಚಿವ ಎಸ್.ಸುರೇಶ್ ಕುಮಾರ್, ಕಾನೂನು ಸಚಿವ ಜೆ.ಸಿ.ಮಾಧುಸ್ವಾಮಿ ಸಭೆಯಲ್ಲಿದ್ದರು.

**'ಜನಸೇವಕ'ದಲ್ಲಿ ಸರ್ಕಾರದ 53 ಸೇವೆ:** ಬೆಂಗಳೂರು ನಗರದ ಮೂರು ವಿಧಾನಸಭಾ ಕ್ಷೇತ್ರಗಳಲ್ಲಿ ಜನಸೇವಕರು ಈಗಾಗಲೇ ಕಾರ್ಯನಿರ್ವಹಿಸುತ್ತಿದ್ದಾರೆ. ಸರ್ಕಾರದ 53 ಸೇವೆಗಳನ್ನು ಇವರಿಂದ ಪಡೆಯಬಹುದಾಗಿದೆ. ಖಾಸಗಿ ಸಂಸ್ಥೆಯೊಂದರ ಸಹಾಯದೊಂದಿಗೆ ಇದನ್ನು ಕಾರ್ಯರೂಪಕ್ಕೆ ತರಲಾಗಿದೆ. ಜನ ಸೇವಕರು ಮನೆಗೆ ಬಂದು ಸಾರ್ವಜನಿಕರಿಗೆ ಸೇವೆ ಒದಗಿಸಲಿದ್ದಾರೆ. ಇದನ್ನು ಮೈಸೂರು, ಮಂಗಳೂರು, ಹುಬ್ಬಳ್ಳಿ-ಧಾರವಾಡ ನಗರಗಳಲ್ಲೂ ಜಾರಿಗೆ ತರಬಹುದು. ಅದಕ್ಕೂ ಮೊದಲು ಬೆಂಗಳೂರಿನಲ್ಲಿ ಇದರ ಅನುಷ್ಠಾನ ಮತ್ತು ಅನುಕೂಲಗಳ ಬಗ್ಗೆ ತಿಳಿದು, ಮುಂದಿನ ಕ್ರಮ ತೆಗೆದುಕೊಳ್ಳಲಿದ್ದೇವೆ ಎಂದು ಸಚಿವ ಸುರೇಶ್ ಕುಮಾರ್ ಹೇಳಿದರು.

ಆರೋಗ್ಯ ಚೀಟಿ, ಹಿರಿಯ ನಾಗರಿಕರ ಚೀಟಿ, ಆದಾಯ ಪ್ರಮಾಣ ಪತ್ರ, ಜಾತಿ ಪ್ರಮಾಣ ಪತ್ರ, ಖಾತೆ, ಪೊಲೀಸ್ ಇಲಾಖೆಗೆ ಸಂಬಂಧಿಸಿದ ಮಾಹಿತಿ ಹೀಗೆ ಕಂದಾಯ, ಬಿಬಿಎಂಪಿ, ಆರೋಗ್ಯ ಇಲಾಖೆಗೆ ಸೇರಿದ 53 ಸೇವೆಗಳನ್ನು ಜನ ಸೇವಕರು ಒದಗಿಸಲಿದ್ದಾರೆ. ಬೆಳಗ್ಗೆ 8ರಿಂದ ಸಂಜೆ 8ರವರೆಗೆ ಸೇವೆ ಲಭ್ಯವಿದೆ. ಒಟ್ಟಾರೆಯಾಗಿ 115 ರೂ. ಶುಲ್ಕ ವಿಧಿಸುತ್ತೇವೆ. ನಾಗರಿಕರು 080-44554455ಗೆ ಕರೆ ಮಾಡಿ ಸೇವೆಗೆ ಮನವಿ ಸಲ್ಲಿಸಬಹುದಾಗಿದೆ. ಜನ ಸೇವಕ ಮೊಬೈಲ್ ಆ್ಯಪ್ ಮೂಲಕವೂ ಸೇವೆ ಪಡೆಯಬಹುದಾಗಿದೆ. ರಾಜಾಜಿನಗರ, ಬೊಮ್ಮನಹಳ್ಳಿ ಹಾಗೂ ಮಹದೇವಪುರದಲ್ಲಿ ಸೇವೆ ಈಗ ಆರಂಭವಾಗಲಿದೆ.

**ಜನಸ್ನೇಹಿ ಸಹಾಯ ವೇದಿಕೆ:** ಯಾವುದೇ ಇಲಾಖೆ ಮಾಹಿತಿ ಬೇಕಾದರೂ ಜನಸ್ನೇಹಿ ವೇದಿಕೆಗೆ ವ್ಯಾಟ್ಸ್‌ಆ್ಯಪ್ ಮೂಲಕ ಪಡೆಯಬಹುದಾಗಿದೆ. ಜನರ ಕುಂದುಕೊರತೆ ನಿವಾರಿಸುವ ಉದ್ದೇಶದಿಂದ ಈ ಕಾರ್ಯಕ್ರಮ ರೂಪಿಸಲಾಗಿದೆ. ವ್ಯಾಟ್ಸ್‌ಆ್ಯಪ್ ಮತ್ತು ಟ್ವೀಟರ್ ಮೂಲಕ ಜನ ಸಮಸ್ಯೆಗಳ ಬಗ್ಗೆ ಸರ್ಕಾರದ ಗಮನ ಸೆಳೆಯಬಹುದಾಗಿದೆ. 9980299802ಕ್ಕೆ ವ್ಯಾಟ್ಸ್‌ಆ್ಯಪ್ ಅಥವಾ @Karnataka_DIPR ಟ್ವೀಟ್ ಮಾಡಬಹುದಾಗಿದೆ.

**ಆಶಾದೀಪ ಯೋಜನೆ:** ಕಾರ್ಮಿಕರ ಕುಂದುಕೊರತೆ ನಿವಾರಿಸುವ ಸಹಾಯವಾಣಿಯಿದು. ಕಾರ್ಮಿಕರಿಗಾಗಿ ಇರುವ ಯೋಜನೆ, ಕಾರ್ಮಿಕರ ಕಲ್ಯಾಣ ಕಾರ್ಯಕ್ರಮಗಳ ಮಾಹಿತಿ ಇದರಲ್ಲಿ ಸಿಗಲಿದೆ. ದಿನದ 24 ಗಂಟೆಯೂ ಈ ಸೇವೆ ಲಭ್ಯವಿದೆ. ಸಹಾಯವಾಣಿ 155214 ಅಥವಾ ವ್ಯಾಟ್ಸ್‌ಆ್ಯಪ್ ಸಂಖ್ಯೆ 9333333684ಕ್ಕೂ ಸಂಪರ್ಕಿಸಬಹುದು.

ಹಾಗೆಯೇ ಆರ್‌ಟಿಐ ಸೇವೆ ಆನ್‌ಲೈನ್‌ನಲ್ಲಿ ಲಭ್ಯವಿದೆ. ಕಂದಾಯ, ಕಾರ್ಮಿಕ, ನಗರಾಭಿವೃದ್ಧಿ, ಆಹಾರ ಸೇರಿ 8 ಇಲಾಖೆ ಸೇವೆ ಆನ್‌ಲೈನ್‌ನಲ್ಲಿ ಲಭ್ಯವಾಗಲಿದೆ.